## ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 1999

ವಿಧಾನ ಪರಿಷತ್ ಸದಸ್ಯರು : ಶ್ರೀ ಕೆ.ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 27.03.2020

ಉತ್ತರಿಸುವವರು : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಗೆ ಒಳಪಟ್ಟ ಯೋಜನೆಗಳು ಯಾವುವು; ವಿಸ್ತೃತ ಮಾಹಿತಿ ಒದಗಿಸುವುದು; | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಗೆ ಒಳಪಟ್ಟ ಯೋಜನೆಗಳ ವಿವರವನ್ನು ಅನುಬಂಧ-1ರಲ್ಲಿ ಲಗತ್ತಿಸಿದೆ. |
| ಆ) | ಗ್ರಾಮ ವಿಕಾಸ ಯೋಜನೆಯು ಪ್ರಸ್ತುತ ಚಾಲ್ತಿಯಲ್ಲಿದೆಯೇ ಅಥವಾ ತಡೆಹಿಡಿಯಲಾಗಿದೆಯೇ; ತಡೆಹಿಡಿದಿದ್ದರೆ, ಕಾರಣದೊಂದಿಗೆ ಮಾಹಿತಿ ಒದಗಿಸುವುದು; | • 2014-15ನೇ ಸಾಲಿನಲ್ಲಿ ಪ್ರಾರಂಭವಾದ ಗ್ರಾಮ ವಿಕಾಸ ಯೋಜನೆಯು ಮುಕ್ತಾಯಗೊಂಡಿರುತ್ತದೆ.<br>• 2017-18 ರಿಂದ ಈ ಯೋಜನೆಯನ್ನು ಮುಖ್ಯಮಂತ್ರಿ ಗ್ರಾಮ ವಿಕಾಸ ಯೋಜನೆ ಎಂದು ಹೆಸರಿಸಿ ಪ್ರತಿ ಗ್ರಾಮಕ್ಕೆ ರೂ.1.00 ಕೋಟಿಯಂತೆ ನಿಗಧಿಪಡಿಸಿ 1000 ಗ್ರಾಮಗಳನ್ನು ಅಭಿವೃದ್ಧಿ ಪಡಿಸಲಾಗಿತ್ತಿದೆ. |
| ಇ) | ಗ್ರಾಮ ವಿಕಾಸ ಯೋಜನೆಯನ್ನು ಮುಂದುವರೆಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? | ಪ್ರಸ್ತುತ ಮುಖ್ಯಮಂತ್ರಿ ಗ್ರಾಮ ವಿಕಾಸ ಯೋಜನೆ ಚಾಲ್ತಿಯಲ್ಲಿರುತ್ತದೆ. |

ಸಂ: ಗ್ರಾಅಪ/ 1/100/ಆರ್‌ಆರ್‌ಸಿ/2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

# ಅನುಬಂಧ-1

**<u>ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ</u>**

- ಕೇಂದ್ರ ಸರ್ಕಾರ ಅನುದಾನಿತ ಯೋಜನೆ:- ಭಾರತ ಸರ್ಕಾರವು ಮುಖ್ಯ ರಸ್ತೆ ಹಾಗೂ ಪ್ರಮುಖ ಕೂಡು ರಸ್ತೆಗಳ ಬಲವರ್ಧನೆ ಮತ್ತು ನವೀಕರಣಕ್ಕಾಗಿ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ-III ಅನ್ನು ಅನುಮೋದಿಸಿದೆ.
- ಅನುದಾನ ಮಾದರಿ:- ಕೇಂದ್ರದ ಪಾಲು ಶೇಕಡ 60
- ರಾಜ್ಯದ ಪಾಲು ಶೇಕಡ 40
- ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ-III ರಡಿ ಕರ್ನಾಟಕ ರಾಜ್ಯಕ್ಕೆ ಒಟ್ಟು 5612.50 ಕಿ.ಮೀ. ಹಂಚಿಕೆ ಮಾಡಲಾಗಿದೆ (ಪ್ರತಿ ತಾಲ್ಲೂಕಿಗೆ ಸುಮಾರು 25 ರಿಂದ 30 ಕಿ.ಮೀ).
- ರಸ್ತೆಗಳ ಯೋಜನೆ ಮತ್ತು ಆಯ್ಕೆ:- (ಕೇಂದ್ರ ಸರ್ಕಾರದ ಮಾರ್ಗಸೂಚಿಯ ಪ್ರಕಾರ)

**<u>ನಮ್ಮ ಗ್ರಾಮ ನಮ್ಮ ರಸ್ತೆ</u>**

- ರಸ್ತೆಗಳ ಅಭಿವೃದ್ಧಿಯನ್ನು ಆದ್ಯತೆಯನ್ನಾಗಿಸಿ ಗ್ರಾಮೀಣ ರಸ್ತೆಗಳನ್ನು ಸರ್ವಋತು ರಸ್ತೆಗಳನ್ನಾಗಿ ಮಾಡಲು 500 ಕ್ಕಿಂತ ಕಡಿಮೆ ಜನಸಂಖ್ಯೆ ಇರುವ ಜನವಸತಿಗಳಿಗೂ ಸೇರಿದಂತೆ ಉತ್ತಮ ಸಂಪರ್ಕ ಕಲ್ಪಿಸಲು ರಾಜ್ಯದ ಅನುದಾನದಲ್ಲಿ 2009-10ನೇ ಸಾಲಿನಿಂದ "ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ" ಯನ್ನು ಜಾರಿಗೆ ತರಲಾಗಿದೆ.
- ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಹಂತ-1 & 2 ರಲ್ಲಿ ರಸ್ತೆ ನಿರ್ಮಾಣದ ನಂತರ 5 ವರ್ಷಗಳ ನಿರ್ವಹಣೆ ಕಡ್ಡಾಯ.
- ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಹಂತ-3 & 4 ರಲ್ಲಿ ರಸ್ತೆ ನಿರ್ಮಾಣದ ನಂತರ 5 ವರ್ಷಗಳ ನಿರ್ವಹಣೆ ಮತ್ತು 6ನೇ ವರ್ಷದಲ್ಲಿ ಮರು ಡಾಂಬರೀಕರಣ ಕಡ್ಡಾಯ.

**<u>ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರಿನ ಕಾರ್ಯಕ್ರಮ</u>**

ರಾಜ್ಯದ ಗ್ರಾಮೀಣ ಪ್ರದೇಶಗಳಿಗೆ ಸುರಕ್ಷಿತ ಕುಡಿಯುವ ನೀರು ಒದಗಿಸುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ.

**<u>ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ</u>**

ಉದ್ಯೋಗ ಕೋರಿ ಅರ್ಜಿ ಸಲ್ಲಿಸುವ ಗ್ರಾಮೀಣ ಜನರಿಗೆ ಆರ್ಥಿಕ ವರ್ಷವೊಂದರಲ್ಲಿ ಕನಿಷ್ಠ ನೂರು ದಿನಗಳ ಉದ್ಯೋಗವನ್ನು ಪ್ರತಿ ಕುಟುಂಬಕ್ಕೆ ನೀಡಿ ಜೀವನಕ್ಕೆ ಭದ್ರತೆ ಒದಗಿಸುವುದೇ ಈ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ.

**<u>ಸ್ವಚ್ಛ ಭಾರತ್ ಯೋಜನೆ</u>**

ಗ್ರಾಮ ಹಾಗೂ ಸಮುದಾಯ ಮಟ್ಟದಲ್ಲಿಯೇ ತ್ಯಾಜ್ಯಗಳ ಸೂಕ್ತ ವಿಲೇವಾರಿ ಹಾಗೂ ಸಮರ್ಪಕ ನಿರ್ವಹಣೆಯನ್ನು ಅಭಿವೃದ್ಧಿಪಡಿಸುವ ಮೂಲಕ ಇಡೀ ಗ್ರಾಮೀಣ ಪರಿಸರದಲ್ಲಿ ಸಂಪೂರ್ಣ ನೈರ್ಮಲ್ಯವನ್ನು ಸಾಧಿಸುವುದು ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿರುತ್ತದೆ. ಸದರಿ ಯೋಜನೆಯಡಿ ಗ್ರಾಮೀಣ ಪ್ರದೇಶದಲ್ಲಿ ವಾಸಿಸುವ ಪ್ರತಿಯೊಂದು ಬಿ.ಪಿ.ಎಲ್. ಕುಟುಂಬಗಳು ಹಾಗೂ ನಿರ್ಬಂಧಿತ ಎಪಿಎಲ್ ವರ್ಗಕ್ಕೆ ಸೇರಿದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡ ಕುಟುಂಬಗಳು, ಸಣ್ಣ ಮತ್ತು ಅತಿಸಣ್ಣ ಕುಟುಂಬಗಳು, ಭೂರಹಿತ ಕುಟುಂಬಗಳಿಗೆ, ಅಂಗವಿಕಲರಿರುವ ಕುಟುಂಬಗಳಿಗೆ ಹಾಗೂ ಮಹಿಳಾ ಮುಖ್ಯಸ್ಥ ಕುಟುಂಬಗಳು ವೈಯಕ್ತಿಕ ಗೃಹ ಶೌಚಾಲಯವನ್ನು ಕಟ್ಟಿಕೊಂಡಲ್ಲಿ ಕೇಂದ್ರ ಸರ್ಕಾರ ರೂ. 7200/- ರಾಜ್ಯ ಸರ್ಕಾರ ರೂ.4800/- ಒಟ್ಟು ರೂ. 12000/- ಗಳು ಹಾಗೂ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡ ಕುಟುಂಬಗಳಿಗೆ ರೂ.15000/- ಗಳ (ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ರೂ.3000/-ಗಳನ್ನು ಎಸ್‌ಸಿಪಿ/ಟಿಎಸ್‌ಪಿಯಡಿ ನೀಡಲಾಗುತ್ತಿದೆ) ಪ್ರೋತ್ಸಾಹಧನವಾಗಿ ನೀಡುತ್ತಿದೆ.

**ಆರ್.ಐ.ಡಿ.ಎಫ್. ನಬಾರ್ಡ್ ರಸ್ತೆ (ಎಸ್.ಡಿ.ಸಿ)**

ಗ್ರಾಮೀಣ ರಸ್ತೆಗಳ ಅಭಿವೃದ್ಧಿ

**ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ**

ರಸ್ತೆ ಮತ್ತು ಸೇತುವೆಗಳ ನಿರ್ವಹಣೆ, ದುರಸ್ತಿ ಮತ್ತು ಅಭಿವೃದ್ಧಿಪಡಿಸುವುದು ಈ ಯೋಜನೆಯ ಮುಖ್ಯ ಉದ್ದೇಶ.

**ಸುವರ್ಣ ಗ್ರಾಮೋದಯ / ಗ್ರಾಮ ವಿಕಾಸ ಯೋಜನೆ/ ಮುಖ್ಯಮಂತ್ರಿ ಗ್ರಾಮ ವಿಕಾಸ**

ಸುವರ್ಣ ಗ್ರಾಮೋದಯ ಯೋಜನೆಯು ಗ್ರಾಮಗಳನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲು ಹಾಗೂ ಗ್ರಾಮೀಣ ಜನರ ಜೀವನ ಮಟ್ಟವನ್ನು ಉತ್ತಮಗೊಳಿಸಲು ಯೋಜನೆಯನ್ನು ಜಾರಿಗೆ ತರಲಾಗಿದೆ. ಗ್ರಾಮದೊಳಗಿನ ರಸ್ತೆ, ಚರಂಡಿ, ಗ್ರಂಥಾಲಯ, ಸಭಾ ಭವನ, ಆಟದ ಮೈದಾನ, ಗರಡಿ ಮನೆ, ತಿಪ್ಪೆ ಗುಂಡಿಗಳ ವೈಜ್ಞಾನಿಕ ನಿರ್ವಹಣೆ ಹಾಗೂ ಗುಡಿ, ಮಸೀದಿ, ಚರ್ಚ್‌ಗಳ ಜೀರ್ಣೋದ್ಧಾರ ಕಾಮಗಾರಿಗಳನ್ನ ಕೈಗೊಂಡು ಪ್ರತಿಯೊಬ್ಬರ ಜೀವನ ಮಟ್ಟದಲ್ಲಿ ಬದಲಾಣೆ ತಂದು ಗ್ರಾಮಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯ ಒದಗಿಸುವ ದಿಶೆಯಲ್ಲಿ ಯೋಜನೆಯನ್ನು ರೂಪಿಸಲಾಗಿದೆ.

**ಪಿ.ಎಂ.ಜಿ.ಎಸ್.ವೈ ರಸ್ತೆಗಳ ನಿರ್ವಹಣೆ**

ಪಿ.ಎಂ.ಜಿ.ಎಸ್.ವೈ ಯೋಜನೆಯಡಿ ನಿರ್ಮಿಸಿರುವ ರಸ್ತೆಗಳ ನಿರ್ವಹಣೆ

**ಕೆರೆಗಳ ಪುನರ್ಜೀವನ ಮತ್ತು ಪುನ:ಶ್ಚೇತನ**

ಜಿಲ್ಲಾ ಪಂಚಾಯತ್ ಕೆರೆಗಳ ಪುನರ್ಜೀವನ ಹಾಗೂ ಪುನ:ಶ್ಚೇತನಕ್ಕಾಗಿ ಈ ಯೋಜನೆಯನ್ನು ಜಾರಿಗೊಳಿಸಲಾಗಿದೆ.

**14ನೇ ಹಣಕಾಸು ಆಯೋಗ ಅನುದಾನ (ಮೂಲ ಅನುದಾನ)**

ನಾಗರೀಕ ಮೂಲ ಸೇವೆಗಳ ಸ್ಥಿತಿಯನ್ನು ಉತ್ತಮಗೊಳಿಸಲು ಹಾಗೂ ಶೇ.25 ರಷ್ಟು ಅನುದಾನವನ್ನು ESCROW ಖಾತೆಗಳಿಗೆ ಬಿಡುಗಡೆ ಮಾಡಿ ಗ್ರಾಮ ಪಂಚಾಯಿತಿಗಳ ವಿದ್ಯುತ್ ಬಿಲ್ಲುಗಳನ್ನು ಪಾವತಿಸಲು ಪೂರ್ಣ ಪ್ರಮಾಣದ ಅನುದಾನವನ್ನು ಕೇಂದ್ರ ಸರ್ಕಾರವೇ ಬಿಡುಗಡೆಗೊಳಿಸುತ್ತದೆ.

**ರಾಜೀವ್ ಗಾಂಧಿ ಸಶಕ್ತೀಕರಣ ಅಭಿಯಾನ**

ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ರಾಷ್ಟ್ರದಾದ್ಯಂತ ಅನುಷ್ಠಾನಗೊಳಿಸುತ್ತಿರುವ ಇ-ಪಂಚಾಯತ್, ಪಂಚಾಯತ್ ಎಂಪವರ್‌ಮೆಂಟ್ & ಅಕೌಂಟಬಿಲಿಟಿ ಇನ್ಸೆಂಟೀವ್ ಸ್ಕೀಂ, ಪಂಚಾಯತ್ ಮಹಿಳಾ ಏವಂ ಯುವಶಕ್ತಿ ಅಭಿಯಾನ ಹಾಗೂ ಬಿ.ಆರ್.ಜಿ.ಎಫ್. ಯೋಜನೆಗಳಲ್ಲಿ ಅಳವಡಿಸಿಕೊಳ್ಳಲಾಗಿದ್ದ ಸಾಮಾರ್ಥ್ಯಾಭಿವೃದ್ಧಿ ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಸಮ್ಮಿಳನಗೊಳಿಸಿ ಪಂಚಾಯತ್ ರಾಜ್ ಸಂಸ್ಥೆಗಳನ್ನು ಹಾಗೂ ಅದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತ್ ರಾಜ್ ಸಂಸ್ಥೆಗಳನ್ನು ಹಾಗೂ ಅದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಸಾಮಾರ್ಥ್ಯಾಭಿವೃದ್ಧಿಯನ್ನು ಬಲಪಡಿಸುವ ಉದ್ದೇಶದಿಂದ ರಾಜೀವ್ ಗಾಂಧಿ ಪಂಚಾಯತ್ ಸಶಕ್ತೀಕರಣ ಅಭಿಯಾನ ಕೇಂದ್ರ ಸರ್ಕಾರವು ಜಾರಿಗೊಳಿಸಿದೆ.

## ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆ

ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಕಾರ್ಯಕ್ರಮವು ಕೇಂದ್ರ ಪುರಸ್ಕೃತ ಕಾರ್ಯಕ್ರಮವಾಗಿದ್ದು, 1982-83ನೇ ಸಾಲಿನಿಂದ ಇದುವರೆವಿಗೂ ಅನುಷ್ಠಾನಗೊಳ್ಳಲಾಗುತ್ತಿದ್ದು, ಶೇ.100 ಮಹಿಳೆಯರಿಗಾಗಿಯೇ ಇರುವ ಕಾರ್ಯಕ್ರಮವಾಗಿರುತ್ತದೆ. ಜೈವಾನಿಲಯವು ಸ್ವಚ್ಛ ಮಾಲಿನ್ಯ ಹೊಗೆರಹಿತ ಹಾಗೂ ಸ್ಫೋಟಗೊಳ್ಳದ ಅಪಾಯರಹಿತ ಇಂಧನ ತ್ಯಾಜ್ಯ ವಸ್ತುಗಳಾದ ಸಗಣಿ, ಪ್ರಾಣಿ ಮತ್ತು ಮಾನವ ಮಲ ಮೂತ್ರ ಮತ್ತು ಇತರೆ ಸಸ್ಯ ಜನ್ಯ ಪದಾರ್ಥಗಳನ್ನು ಆಮ್ಲಜನಕ ರಹಿತ ವಾತವರಣದಲ್ಲಿನ ಜೈವಿಕ ಕ್ರಿಯೆಯಿಂದ ದೊರೆಯುವ ಸಂಯುಕ್ತ ಅನಿಲವೇ ಜೈವಿಕ ಅನಿಲ. ರಾಜ್ಯದಲ್ಲಿ ಗ್ರಾಮೀಣ ಇಂಧನ ಕಾರ್ಯಕ್ರಮಗಳು ನವೀಕರಿಸಬಹುದಾದ ಶಕ್ತಿ ಮೂಲಗಳ ಗುಣಾತ್ಮಕ ಮತ್ತು ಪರಿಣಾಮಕಾರಿ ಬಳಕೆಯ ಮೂಲ ಉದ್ದೇಶವನ್ನು ಹೊಂದಿದೆ. ಸದರಿ ಯೋಜನೆಯಡಿ ಜೈವಾನಿಲ ಸ್ಥಾವರಗಳ ನಿರ್ಮಾಣಕ್ಕೆ ಸಹಾಯಧನವನ್ನು ನೀಡಲಾಗುತ್ತಿದೆ.

### ಜಿಲ್ಲಾ ಪಂಚಾಯಿತಿ ಅಭಿವೃದ್ಧಿ ಅನುದಾನ

ಜಿಲ್ಲಾ ಪಂಚಾಯತ್ ಅನುಮೋದಿತ ಕ್ರಿಯಾಯೋಜನೆಯಂತೆ ರಸ್ತೆ, ಕಟ್ಟಡ ಕುಡಿಯುವ ನೀರು, ಹಳ್ಳಿ ಸಂತೆ, ಇತರೆ ಅಭಿವೃದ್ಧಿ ಕಾರ್ಯಕ್ರಮವನ್ನು ಕೈಗೊಳ್ಳಲಾಗುತ್ತದೆ.

### ಗ್ರಾಮ ಪರಿಮಿತಿಗಳಲ್ಲಿನ ರಸ್ತೆಗಳ ಕಾಂಕ್ರೀಟ್ / ಡಾಂಬರೀಕರಣ

ಗ್ರಾಮೀಣ ಪ್ರದೇಶಗಳ ಪರಿಮಿತಿಯಲಿರುವ ರಸ್ತೆಗಳ ಡಾಂಬರೀಕರಣ ಹಾಗೂ ನಿರ್ವಹಣೆ

### ತಾಲ್ಲೂಕು ಪಂಚಾಯತಿಗಳಿಗೆ ಅನುದಾನ

ತಾಲ್ಲೂಕು ಪಂಚಾಯತ್ ಅನುಮೋದಿತ ಕ್ರಿಯಾಯೋಜನೆಯಂತೆ ರಸ್ತೆ, ಕಟ್ಟಡ ಕುಡಿಯುವ ನೀರು, ಹಳ್ಳಿ ಸಂತೆ, ಇತರೆ ಅಭಿವೃದ್ಧಿ ಕಾರ್ಯಕ್ರಮವನ್ನು ಕೈಗೊಳ್ಳಲಾಗುತ್ತದೆ.

### ಗ್ರಾಮ ಪಂಚಾಯತಿಗಳಿಗೆ ಶಾಸನ ಬದ್ಧ ಅನುದಾನ

ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಹಾಗೂ ವೇತನ, ವಿದ್ಯುತ್ಶಕ್ತಿ ಬಿಲ್ ಪಾವತಿಸಲಾಗುತ್ತದೆ.

### ಜಲಾಮೃತ ಯೋಜನೆ

ಜಲ ಜೀವದ ಮೂಲ ಜಾಗತಿಕ ಹವಾಮಾನ ಬದಲಾವಣೆಯ ಪ್ರತಿಕೂಲ ಪರಿಣಾಮಗಳನ್ನು ಸತತ ಬರಗಾಲಗಳ ಮುಖಾಂತರ ಎದುರಿಸುತ್ತಿದ್ದು, 2019-20ನೇ ಸಾಲಿನಿಂದ ಜಲಾಮೃತ ಯೋಜನೆಯನ್ನು ಜಾರಿ ಮಾಡಿ ಜಲ ಸಂರಕ್ಷಣೆ, ಜಲ ಸಾಕ್ಷರತೆ, ಜಲ ಮೂಲಗಳ ಪುನಶ್ಚೇತನ ಮತ್ತು ಹಸರೀಕರಣವನ್ನು ಕೇಂದ್ರವಾಗಿಟ್ಟುಕೊಂಡು ಗ್ರಾಮೀಣ ಪ್ರದೇಶದ ಕೆರೆ, ಕಟ್ಟೆಗಳು, ಗೋಕಟ್ಟೆ ಇತ್ಯಾದಿಗಳ ಹೂಳೆತ್ತುವ ಕಾಮಗಾರಿಗಳನ್ನು ನಿರ್ವಹಿಸಲಾಗುತ್ತಿದೆ.